12

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಾಸರಹಳ್ಳಿ ವಲಯ,

ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು -560073.

ಸಂ:ಮು.ಅ/ದಾವ/ತಾ.ಮ/ 54/2012-13

ಮುಖ್ಯ ಅಭಿಯಂತರವರ ಕಛೇರಿ,
ದಾಸರಹಳ್ಳಿ ವಲಯ, ಬೆಂಗಳೂರು.
ದಿನಾಂಕ: 17-10-2012

ತಾಂತ್ರಿಕ ಮಂಜೂರಾತಿ

ಕಾಮಗಾರಿ ಹೆಸರು: Drilling of borewell providing and pumping machinery and pipeline for supply of water to Chikkasandra, Medarahalli, Abbigere, Kammagondanahalli in W.No-12 Shettyhalli Sub-division.

ಅಂದಾಜು ವೆಚ್ಚ: 70.00 ಲಕ್ಷಗಳು.

ಕಾಮಗಾರಿ ಸಂಕೇತ/ಜಾಬ್ ಕೋಡ್ : 012-12-000048 P-Code : P 0190.

ಉಲ್ಲೇಖ:- 1. ವಾರ್ಡ್‌ಮಟ್ಟದ ಸಾರ್ವಜನಿಕ ಕಾಮಗಾರಿ ಸಮಿತಿಯ ಸಭೆ ನಡುವಳಿ ಸಂಖ್ಯೆ:ವಾಕಾಸ್ಥಮ/98/12-13, ದಿನಾಂಕ:-05/09/2012.

2 ಜಂ.ಆ/ದಾ.ವ/ಆ.ಮ/423/2012-13, ದಿನಾಂಕ:-11-10-2012.

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗದವರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿಯನ್ನು ಕೋರಿರುವ ಮೇರೆಗೆ, ಉಲ್ಲೇಖ 1ರ ನಿರ್ಣಯದಂತೆ ಜಂಟಿ ಆಯುಕ್ತರು (ದಾಸರಹಳ್ಳಿ ವಲಯ) ರವರು 2ರ ಉಲ್ಲೇಖದನ್ವಯ ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.70.00 ಲಕ್ಷಗಳಿಗೆ ಅನುಮೋದನೆ ನೀಡಿರುತ್ತಾರೆ. ಅದರಂತೆ ಸದರಿ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರು ಸಲ್ಲಿಸಿರುವ ಮಾರ್ಪಾಡು ಅಂದಾಜು ಪಟ್ಟಿಯ ಮೊತ್ತ ರೂ.70.00 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ ಮತ್ತು ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ:41 ಕ್ರಮ ಸಂಖ್ಯೆ:54ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
2. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಶನ್ ಕರೆದು ಅನುಮೊದನೆ ಪಡೆಯುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ರಸ್ತೆ ಇತಿಹಾಸ ಪುಸ್ತಕದಲ್ಲಿ ಸದರಿ ಕಾಮಗಾರಿಯಲ್ಲಿನ ವಿವಿಧ ಕೆಲಸಗಳ ವಿವರಗಳನ್ನು ನಮೂದಿಸುವುದು.

ಮುಖ್ಯ ಅಭಿಯಂತರರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ದಾಸರಹಳ್ಳಿ ವಲಯ.

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ:

1. ಸಹಾಯಕ ಕಾರ್ಯಪಾಲಕ ಅಭಿಯಂತರರು, ಶೆಟ್ಟಿಹಳ್ಳಿ / ಟಿ.ದಾಸರಹಳ್ಳಿ ಉಪ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಾಸರಹಳ್ಳಿ ವಲಯ ಬೆಂಗಳೂರು. ಮೂಲ ಅಂದಾಜು ಪಟ್ಟಿಯೊಂದಿಗೆ ಮುಂದಿನ ಕ್ರಮಕ್ಕಾಗಿ.
2. ಸಹಾಯಕ ಹಣಕಾಸು ನಿಯಂತ್ರಕರು, ದಾಸರಹಳ್ಳಿ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಕಛೇರಿ ಪ್ರತಿ.